Akashvani : Bangalore
National Bulletin In Kannada
14.02.2025 / 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಮಹಿಳೆಯರು ಹಿರಿದಾದ ಗುರಿಯನ್ನು ಹೊಂದಿ ಧೈರ್ಯ, ಶಕ್ತಿ, ಸಾಮರ್ಥ್ಯದಿಂದ ಅದನ್ನು ಸಾಕಾರಗೊಳಿಸಿಕೊಳ್ಳಲು ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ
- ಭಾರತ- ಅಮೆರಿಕ ಮುಂದಿನ ಹತ್ತು ವರ್ಷಗಳ ಅವಧಿಗೆ ಬೃಹತ್ ರಕ್ಷಣಾ ಸಹಭಾಗಿತ್ವದ ಚೌಕಟ್ಟಿನ ಅಂಕಿತಕ್ಕೆ ಘೋಷಣೆ
- ಸರ್ಕಾರಿ ಸ್ವಾಮ್ಯದ ಭಾರತ್ ಸಂಚಾರ್ ನಿಗಮ್-ಬಿಎಸ್‌ಎನ್‌ಎಲ್ ಪ್ರಸ್ತುತ ಹಣಕಾಸು ವರ್ಷದ ಮೂರನೇ ತ್ರೈಮಾಸಿಕದಲ್ಲಿ ೨೬೨ ಕೋಟಿ ರೂಪಾಯಿ ಲಾಭ ದಾಖಲು
- ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್; ಮೂರನೇ ಆವೃತ್ತಿ ವಡೋದರಾದಲ್ಲಿ ಇಂದು ಆರಂಭ

<><*<><>*><>

ಮಹಿಳೆಯರು ಹಿರಿದಾದ ಗುರಿಯನ್ನು ಇಟ್ಟುಕೊಂಡು ಧೈರ್ಯ, ಶಕ್ತಿ ಹಾಗೂ ಸಾಮರ್ಥ್ಯದಿಂದ ಅದನ್ನು ಸಾಕಾರಗೊಳಿಸಿಕೊಳ್ಳಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ ನೀಡಿದ್ದಾರೆ. ಅವರು ಬೆಂಗಳೂರಿನಲ್ಲಿಂದು ಆರ್ಟ್ ಆಫ್ ಲೀವಿಂಗ್ ಇಂಟರ್‌ನ್ಯಾಷಿನಲ್ ಕೇಂದ್ರ ಆಯೋಜಿಸಿದ್ದ ೧೦ನೇ ಅಂತಾರಾಷ್ಟ್ರೀಯ ಮಹಿಳಾ ಅಧಿವೇಶನದಲ್ಲಿ ಪ್ರತಿನಿಧಿಗಳನ್ನುದ್ದೇಶಿಸಿ ಮಾತನಾಡಿ, ಮಹಿಳೆಯರು ನಿರ್ಭೀತರಾಗಿರಬೇಕು. ಅಡೆತಡೆಗಳನ್ನು ಮೀರಿ ವಿಭಿನ್ನವಾಗಿ ಮಹತ್ವದ ಗುರಿ ಹೊಂದಬೇಕು ಎಂದರು. ತಂತ್ರಜ್ಞಾನ ಮುನ್ನಡೆಯಲ್ಲಿ ಇರುವ ಪ್ರಸ್ತುತ ಸನ್ನಿವೇಶದಲ್ಲಿ ಮಾನವೀಯ ಮೌಲ್ಯಗಳನ್ನು ಕಾಪಾಡಿಕೊಂಡು ಬರಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

ಧ್ವನಿ: ರಾಷ್ಟ್ರಪತಿ ದ್ರೌಪದಿ ಮುರ್ಮು ( ೧೯ ಸೆಕೆಂಡ್‌ಗಳು)

ಭೂಮಾತೆಯ ರಕ್ಷಣೆಗಾಗಿ ಹಾಗೂ ಪರಿಸರ ರಕ್ಷಣೆಗಾಗಿ ಎಲ್ಲರೂ ಶ್ರಮಿಸಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಕೋರಿದರು.

ಧ್ವನಿ: ರಾಷ್ಟ್ರಪತಿ ದ್ರೌಪದಿ ಮುರ್ಮು ( ೩೫ ಸೆಕೆಂಡ್‌ಗಳು)

<><*<><>*><>

ಭಾರತ- ಅಮೆರಿಕ ಮುಂದಿನ ಹತ್ತು ವರ್ಷಗಳ ಅವಧಿಗೆ ಬೃಹತ್ ರಕ್ಷಣಾ ಸಹಭಾಗಿತ್ವದ ಚೌಕಟ್ಟಿಗೆ ಅಂಕಿತ ಹಾಕುವುದಾಗಿ ಘೋಷಿಸಿವೆ. ಉಭಯ ದೇಶಗಳು ರಕ್ಷಣಾ ಒಪ್ಪಂದಗಳನ್ನು ಬಲಪಡಿಸುವ ಗುರಿಯನ್ನು ಹೊಂದಿವೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್

ವಾಷಿಂಗ್ಟನ್ ಡಿಸಿ ಯಲ್ಲಿ ನಡೆಸಿದ ಸಭೆಯಲ್ಲಿ ಈ ಬಗ್ಗೆ ತೀರ್ಮಾನ ಕೈಗೊಳ್ಳಲಾಗಿದೆ. ಭಾರತದೊಂದಿಗೆ ರಕ್ಷಣಾ ಉತ್ಪನ್ನಗಳ ಮಾರಾಟ ಮತ್ತು ಸಹ ಉತ್ಪಾದನೆ ಹಾಗೂ ರಕ್ಷಣಾ ಔದ್ಯಮಿಕ ಸಹಕಾರಕ್ಕಾಗಿ ಸಂಕಲ್ಪ ಹೊಂದಿವೆ ಎಂದು ಜಂಟಿ ಹೇಳಿಕೆಯಲ್ಲಿ ತಿಳಿಸಲಾಗಿದೆ. ಭಾರತ-ಅಮೆರಿಕ, ೨೦೩೦ ರ ವೇಳೆಗೆ ೫೦೦ ಶತಕೋಟಿ ಡಾಲರ್ ದ್ವಿಪಕ್ಷೀಯ ವ್ಯಾಪಾರ ಹೊಂದಲು ನಿರ್ಧರಿಸಿವೆ.

ಧ್ವನಿ: ಪ್ರಧಾನಿ ನರೇಂದ್ರ ಮೋದಿ

ಉಭಯ ದೇಶಗಳು ಭಯೋತ್ಪಾದಕತೆ ನಿರ್ಮೂಲನೆಗೆ ದಿಟ್ಟ ಕ್ರಮಗಳನ್ನು ಕೈಗೊಳ್ಳಲು ತೀರ್ಮಾನಿಸಿವೆ.

ಧ್ವನಿ: ಪ್ರಧಾನಿ ನರೇಂದ್ರ ಮೋದಿ

**<><*<><>*><>**

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ನಾಳೆ ಜಮ್ಮುವಿಗೆ ಒಂದು ದಿನದ ಭೇಟಿ ನೀಡಲಿದ್ದಾರೆ. ಈ ಸಂದರ್ಭದಲ್ಲಿ ಅವರು ಕತ್ರಾದಲ್ಲಿ ಶ್ರೀ ಮಾತಾ ವೈಷ್ಣೋ ದೇವಿ ವಿಶ್ವವಿದ್ಯಾಲಯದ ೧೦ ನೇ ಘಟಿಕೋತ್ಸವದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಉಪರಾಷ್ಟ್ರಪತಿಗಳು ರಿಯಾಸಿ ಜಿಲ್ಲೆಯ ತ್ರಿಕೂಟ ಬೆಟ್ಟಗಳ ಮೇಲಿರುವ ಮಾತಾ ವೈಷ್ಣೋ ದೇವಿ ದೇವಾಲಯ ಮತ್ತು ಭೈರೋನ್ ದೇವಾಲಯದಲ್ಲಿ ಪೂಜೆ ಸಲ್ಲಿಸಲಿದ್ದಾರೆ.

**<><*<><>*><>**

ಕಳೆದ ೪ ದಿನಗಳಿಂದ ಬೆಂಗಳೂರಿನ ಯಲಹಂಕದ ವಾಯುನೆಲೆಯಲ್ಲಿ ನಡೆದ ಏರೋ ಇಂಡಿಯಾ ವೈಮಾನಿಕ ಪ್ರದರ್ಶನ ೨೦೨೫ಕ್ಕೆ ಇಂದು ತೆರೆ ಬಿದ್ದಿದೆ. ಮೊದಲು ವಾಣಿಜ್ಯ ವ್ಯವಹಾರಗಳಿಗೆ ಮೀಸಲಿಟ್ಟ ದಿನಗಳ ಬಳಿಕ, ಕೊನೆಯ ಎರಡು ದಿನ ಸಾರ್ವಜನಿಕ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿದ್ದ ಹಿನ್ನೆಲೆಯಲ್ಲಿ, ಅಪಾರ ಸಂಖ್ಯೆಯಲ್ಲಿ ಜನರು ಆಗಮಿಸಿ ವೈಮಾನಿಕ ಪ್ರದರ್ಶನ ವೀಕ್ಷಿಸಿದರು. ವೈಮಾನಿಕ ಪ್ರದರ್ಶನದಲ್ಲಿ ಸೂರ್ಯಕಿರಣ, ಅಮೆರಿಕ ಎಫ್-೩೫, ರಷ್ಯಾದ SU-೫೭, ತೇಜಸ್ ಹಾಗೂ ಹಗುರ ಯುದ್ಧ ಹೆಲಿಕಾಪ್ಟರ್‌ಗಳ ಪ್ರದರ್ಶನ ಮೈನವಿರೇಳಿಸಿದವು. ಸುಖೋಯ್ ಸೇರಿದಂತೆ ಹಲವು ಯುದ್ಧ ವಿಮಾನಗಳು ಬಾನಂಗಳದಲ್ಲಿ ಚಿತ್ತಾರ ಬಿಡಿಸಿ ಸಾಮರ್ಥ್ಯ ಪ್ರದರ್ಶಿಸಿದವು.

**<><*<><>*><>**

ಸರ್ಕಾರಿ ಸ್ವಾಮ್ಯದ ಭಾರತ್ ಸಂಚಾರ್ ನಿಗಮ್-ಬಿಎಸ್‌ಎನ್‌ಎಲ್ ಪ್ರಸ್ತುತ ಹಣಕಾಸು ವರ್ಷದ ಮೂರನೇ ಅವಧಿಯಲ್ಲಿ ೨೬೨ ಕೋಟಿ ರೂಪಾಯಿ ಲಾಭ ದಾಖಲಿಸಿದೆ. ಇದು ದೂರಸಂಪರ್ಕ ಸೇವೆಯಲ್ಲಿ ಸರ್ಕಾರಕ್ಕಿರುವ ಬದ್ಧತೆಯನ್ನು ತೋರಿಸುತ್ತದೆ ಎಂದು ಕೇಂದ್ರ ಸಂಪರ್ಕ ಖಾತೆ ಸಚಿವ ಜ್ಯೋತಿರಾದಿತ್ಯ ಸಿಂಧ್ಯಾ ನವದೆಹಲಿಯಲ್ಲಿಂದು ಸುದ್ದಿಗಾರರಿಗೆ ತಿಳಿಸಿದರು. ಸುಮಾರು ೧೭ ವರ್ಷಗಳ ನಂತರ ಇದೇ ಮೊದಲ ಬಾರಿಗೆ ಬಿಎಸ್‌ಎನ್‌ಎಲ್ ತ್ರೈಮಾಸಿಕ ಆಧಾರದ ಮೇಲೆ ಲಾಭ ದಾಖಲಿಸಿದೆ ಎಂದು ಅವರು ಹೇಳಿದರು.

**<><*<><>*><>**

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು, ನವದೆಹಲಿಯಲ್ಲಿಂದು ಮಹಾರಾಷ್ಟ್ರದ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರೊಂದಿಗೆ ರಾಜ್ಯದಲ್ಲಿ ಹೊಸ ಕ್ರಿಮಿನಲ್ ಕಾನೂನುಗಳ ಅನುಷ್ಠಾನ ಕುರಿತು ಸಮಾಲೋಚನೆ ನಡೆಸಿದರು. ಹೊಸ ಕ್ರಿಮಿನಲ್ ಕಾನೂನು- ಭಾರತೀಯ ನ್ಯಾಯ ಸಂಹಿತೆ, ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಮತ್ತು ಭಾರತೀಯ ಸಾಕ್ಷ್ಯಾ ಅಧಿನಿಯಮವನ್ನು ಒಳಗೊಂಡಿದೆ. ಮಹಾರಾಷ್ಟ್ರದಲ್ಲಿ ಪೊಲೀಸರು, ಕಾರಾಗೃಹಗಳು, ನ್ಯಾಯಾಲಗಳು ಅಪರಾಧ ವಿಚಾರಣೆ ಮತ್ತು ವಿಧಿವಿಜ್ಞಾನ ವ್ಯವಸ್ಥೆಗಳ ಪ್ರಸ್ತುತ ಸ್ಥಿತಿಯ ಬಗ್ಗೆ ಸಭೆಯಲ್ಲಿ ಪರಿಶೀಲಿಸಲಾಯಿತು. ಮಹಾರಾಷ್ಟ್ರದ ಡಿಜಿಪಿ ರಶ್ಮಿ ಶುಕ್ಲಾ ಮತ್ತು ಇತರ ಹಿರಿಯ ಅಧಿಕಾರಿಗಳು ಈ ಸಭೆಯಲ್ಲಿ ಭಾಗವಹಿಸಿದ್ದರು.

<><*<><>*><>

ಮಸ್ಕತ್ ನಲ್ಲಿ ನಾಡಿದ್ದು ಆರಂಭವಾಗಲಿರುವ ಹಿಂದೂ ಮಹಾಸಾಗರ ಅಧಿವೇಶನದ ಸಂದರ್ಭದಲ್ಲಿ ಭಾರತದ ವಿದೇಶಾಂಗ ಖಾತೆ ಸಚಿವ ಡಾ.ಎಸ್.ಜೈಶಂಕರ್ ಬಾಂಗ್ಲಾದೇಶದ ವಿದೇಶಾಂಗ ಸಲಹೆಗಾರರೊಂದಿಗೆ ಮಾತುಕತೆ ನಡೆಸುವ ನಿರೀಕ್ಷೆ ಇದೆ.  ಭಾರತ ಮತ್ತು ಒಮ್ಮಾನ್ ವಿದೇಶಾಂಗ ಸಚಿವಾಲಯಗಳು  ಜಂಟಿಯಾಗಿ ಎರಡು ದಿನಗಳ ಈ ಅಧಿವೇಶನ ಆಯೋಜಿಸಿದ್ದು ಇದರಲ್ಲಿ ಪಾಲ್ಗೊಳ್ಳಲು ಬಾಂಗ್ಲಾ ದೇಶದ ವಿದೇಶಾಂಗ ಸಲಹೆಗಾರ ಮೊಹಮ್ಮದ್ ತೌಸೀಫ್ ಹುಸೇನ್ ಅವರಿಗೆ ಒಮಾನ್ ಆಮಂತ್ರಣ ನೀಡಿದೆ. ಸಮುದ್ರಯಾನ ಸಹಭಾಗಿತ್ವದಲ್ಲಿ ಹೊಸ ದಿಗಂತಗಳು ಎನ್ನುವುದು ಈ ಅಧಿವೇಶನದ ಘೋಷ ವಾಕ್ಯವಾಗಿದೆ.

<><*<><>*><>

ಹರಿಯಾಣ ವಿಧಾನಸಭೆಯ ಸದಸ್ಯರಿಗಾಗಿ ಚಂಡೀಗಢದಲ್ಲಿ ಇಂದು ಆಯೋಜಿಸಲಾಗಿದ್ದ ಪುನರ್ಮನನ ಕಾರ್ಯಕ್ರಮವನ್ನು ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಅವರು ಮಾತನಾಡಿ, ಸಂಸದೀಯ ವ್ಯವಸ್ಥೆಯ ಮಹತ್ವವನ್ನು ಪ್ರಸ್ತಾಪಿಸಿದರು. ಹರಿಯಾಣ ವಿಧಾನಸಭೆಯ ಸ್ಪೀಕರ್ ಹರವಿಂದರ್ ಕಲ್ಯಾಣ್ ಉಪಸಭಾಪತಿ ಕೃಷ್ಣ ಮಿದ್ದಾ, ಮುಖ್ಯಮಂತ್ರಿ ನಯಾಬ್ ಸಿಂಗ್ ಸೈನಿ, ಉತ್ತರಪ್ರದೇಶ ವಿಧಾನಸಭೆಯ ಸ್ಪೀಕರ್ ಸತೀಶ್ ಮಹಾನ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

<><*<><>*><>

ಇಂಧನ ಶಕ್ತಿ ಸಪ್ತಾಹ ನವದೆಹಲಿಯಲ್ಲಿ ಇಂದು ಮುಕ್ತಾಯವಾಯಿತು.  ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಉದ್ಘಾಟಿಸಿದ್ದ ಈ ಕಾರ್ಯಕ್ರಮ ಇಂಧನ ಕುರಿತಾದ ಎರಡನೇ ಅತೀ ದೊಡ್ಡ ಜಾಗತಿಕ ಸಮಾವೇಶ ಎನಿಸಿದ್ದು ಇದರಲ್ಲಿ ೧೨೦ ದೇಶಗಳ ಸಂಸ್ಥೆಗಳು, ಪ್ರತಿನಿಧಿಗಳು ಪಾಲ್ಗೊಂಡಿದ್ದರು.  ದೇಶದ ಯಶಸ್ವಿ ಕಾರ್ಯಕ್ರಮ ಪ್ರಧಾನಮಂತ್ರಿ ಉಜ್ವಲ ಯೋಜನೆಯನ್ನು ಜಾಗತಿಕ ಅಳವಡಿಕೆ ಮಾದರಿಯಾಗಿ ಪ್ರದರ್ಶಿಸಲಾಗಿತ್ತು.

<><*<><>*><>

ಕೇಂದ್ರ ರೈಲ್ವೆ, ವಾರ್ತಾ ಮತ್ತು ಪ್ರಸಾರ ಖಾತೆ ಹಾಗೂ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಖಾತೆ ಸಚಿವರಾದ ಅಶ್ವಿನಿ ವೈಷ್ಣವ್ ನಾಳೆ ಬೆಂಗಳೂರಿನ ವಲಯ ರೈಲ್ವೆ ವ್ಯವಸ್ಥಾಪಕ ಕಚೇರಿಯಲ್ಲಿ

ರೈಲ್ವೆ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಲಿದ್ದಾರೆ. ಸಂಜೆ ನಡೆಯಲಿರುವ ಇಂಟಲೆಕ್ಚುಯಲ್ ಮೀಟ್ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ.

<><*<><>*><>

ಮಹಿಳಾ ಪ್ರೀಮಿಯರ್ ಲೀಗ್ - ಡಬ್ಲ್ಯೂಪಿಎಲ್ ಕ್ರಿಕೆಟ್ ೨೦೨೫ ರ ಮೂರನೇ ಆವೃತ್ತಿಗೆ ವಡೋದರಾದಲ್ಲಿಂದು ಚಾಲನೆ ದೊರೆಯಿತು. ಇದೀಗ ಆರಂಭವಾಗಿರುವ ಉದ್ಘಾಟನಾ ಪಂದ್ಯದಲ್ಲಿ ಹಾಲಿ ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಗುಜರಾತ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಆರ್‌ಸಿಬಿ, ಫೀಲ್ಡಿಂಗ್ ಆಯ್ದುಕೊಂಡಿದೆ.

<><*<><>*><>

ಉತ್ತರಾಖಂಡ್‌ನಲ್ಲಿಂದು ೩೮ನೇ ರಾಷ್ಟ್ರೀಯ ಕ್ರೀಡೆಗಳು ಮುಕ್ತಾಯವಾದವು. ಸಮಾರೋಪ ಸಮಾರಂಭದಲ್ಲಿ ಅತಿಥಿಯಾಗಿ ಭಾಗವಹಿಸಿದ್ದ ಕೇಂದ್ರ ಗೃಹ ಸಚಿವ ಅಮಿತ್ ಶಾ, ರಾಷ್ಟ್ರೀಯ ಕ್ರೀಡೆಗಳನ್ನು ಯಶಸ್ವಿಯಾಗಿ ಆಯೋಜಿಸಿದ್ದಕ್ಕಾಗಿ ಉತ್ತರಾಖಂಡ ರಾಜ್ಯವನ್ನು ಅಭಿನಂದಿಸಿದರು. ಹಸಿರು ಕ್ರೀಡೆ ಉಪಕ್ರಮಕ್ಕಾಗಿ ಮೆಚ್ಚುಗೆ ವ್ಯಕ್ತಪಡಿಸಿದರು. ಭಾರತೀಯ ಒಲಿಂಪಿಕ್ ಸಂಘಟನೆಯ ಅಧ್ಯಕ್ಷೆ ಪಿ.ಟಿ.ಉಷಾ ರಾಷ್ಟ್ರೀಯ ಕ್ರೀಡೆಗಳ ಸಮಾಪನವನ್ನು ಅಧಿಕೃತವಾಗಿ ಪ್ರಕಟಿಸಿದರು.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>